ಆ) ಪ್ರೌಢಶಾಲೆಯನ್ನು ಮೇಲ್ದರ್ಜೆಗೇರಿಸಿ ಸಂಯುಕ್ತ ಪದವಿ ಪೂರ್ವ ಕಾಲೇಜಾಗಿ ಪರಿವರ್ತಿಸಿರುವುದರಿಂದ ಪದವಿ ಪೂರ್ವ ಕಾಲೇಜನ್ನು ಪ್ರೌಢಶಾಲೆಯ ಕಟ್ಟಡದಲ್ಲಿಯೇ ನಡೆಸಲಾಗುತ್ತಿದೆ.

ಇ) ಪ್ರೌಢಶಾಲೆಯ ಕಟ್ಟಡದಲ್ಲಿಯೇ ಪ್ರಸ್ತುತ ಪದವಿ ಪೂರ್ವ ಕಾಲೇಜುಗಳು ನಡೆಯುತ್ತಿದ್ದು, ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಹೆಚ್ಚುವರಿ ಕೊಠಡಿಗಳ ಅವಶ್ಯಕತೆಯಿದ್ದಲ್ಲಿ ನಿರ್ಮಾಣ ಮಾಡುವ ಬಗ್ಗೆ ಹಣಕಾಸಿನ ಲಭ್ಯತೆಗೆ ಒಳಪಟ್ಟು ಕ್ರಮ ತೆಗೆದುಕೊಳ್ಳಲಾಗುವುದು.

ಈ) ಈ ಕಾಲೇಜುಗಳಿಗೆ ಬೇಕಾಗುವ ಹೆಚ್ಚುವರಿ ಕೊಠಡಿಗಳ ಅಗತ್ಯತೆಯ ಅಂದಾಜುಗಳನ್ನು ಪರಿಗಣಿಸಿ ಹಣಕಾಸಿನ ಲಭ್ಯತೆಗೆ ಒಳಪಟ್ಟು ಹಂತಹಂತವಾಗಿ ಮಂಜೂರು ಮಾಡಲಾಗುವುದು.

ಕಮಲಾಪುರ ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆ.

1820 - ಶ್ರೀ ರೇವುನಾಯಕ್ ಬೆಳಮಗಿ (ಕಮಲಾಪುರ) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆಯ ಕಮಲಾಪುರ ಕ್ಷೇತ್ರದಲ್ಲಿ ನೀರಿನ ಸಮಸ್ಯೆ ಬಹಳ ಇದ್ದು, ಜನರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ?

ಆ) ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಇ) ನೀರಿನ ಸಮಸ್ಯೆ ಪರಿಹಾರ ಮಾಡಲು ಪರ್ಯಾಯ ವ್ಯವಸ್ಥೆಯನ್ನೇನಾದರೂ ಕೈಗೊಂಡಿದೆಯೇ?

ಶ್ರೀ ಎಂ. ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು) :

ಅ) ಬಂದಿದೆ.

ಆ) ಕಮಲಾಪುರ ಕ್ಷೇತ್ರದಲ್ಲಿ 2 ಕೊಳವೆ ನೀರು ಸರಬರಾಜು ಯೋಜನೆಗಳನ್ನು ಮತ್ತು 5 ಕಿರುನೀರು ಸರಬರಾಜು ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಕಮಲಾಪುರ ಬಸವನ ತಾಂಡದ ಕುಡಿಯುವ ನೀರಿನ ಯೋಜನೆಯು ಪೂರ್ಣಗೊಂಡಿರುತ್ತದೆ. ಪ್ರಸಕ್ತ ಸಾಲಿನಲ್ಲಿ 9 ಕೊಳವೆ ನೀರು ಸರಬರಾಜು ಯೋಜನೆಗಳನ್ನು ಮತ್ತು 10 ಕಿರುನೀರು ಸರಬರಾಜು ಯೋಜನೆಗಳನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ. ಅಲ್ಲದೆ, ಅಭಾವ ಪರಿಹಾರ ಕಾರ್ಯಕ್ರಮದಡಿ, 30 ಗ್ರಾಮ/ಜನ ವಸತಿಗಳಲ್ಲಿ ಕೊಳವೆ ಬಾವಿಗಳನ್ನು ಕೊರೆದು ನೀರು ಸರಬರಾಜು ಸ್ಥಿತಿಯನ್ನು ಉತ್ತಮಪಡಿಸಲು ಕ್ರಮ ಕೈಗೊಳ್ಳಲಾಗಿದೆ.

ಇ) ಮೇಲ್ಕಾಣಿಸಿದಂತೆ ವ್ಯವಸ್ಥೆ ಮಾಡಲಾಗಿದೆ.